ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 01–03–2019

ಪತ್ರಿಕಾ ಆಮಂತ್ರಣ

## ಪತ್ರಿಕಾ ಪ್ರಕಟಣೆ

# ಮಾರ್ಚ್ 5 ರಂದು ನಗರದಲ್ಲಿ ಬೃಹತ್ ಆರೋಗ್ಯ ಮೇಳ

ಬೆಂಗಳೂರು, ಮಾರ್ಚ್ 1 (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಮಾರ್ಚ್ 5 ರಂದು ಸರ್. ಸಿ.ವಿ. ರಾಮನ್ ಆಸ್ಪತ್ರೆ ಆವರಣ, ಇಂದಿರಾನಗರ, ವಿವೇಕಾನಂದ ಮೆಟ್ರೋ ಸ್ಟೇಷನ್ ಬಳಿ ಹಮ್ಮಿಕೊಳ್ಳಲಾಗಿದೆ ಎಂದು ಮಲ್ಲೇಶ್ವರಂ ಶಾಸಕರಾದ ಡಾ ಅಶ್ವತ್ಥನಾರಾಯಣ್ ಅವರು ತಿಳಿಸಿದರು.

ಇಂದು ನಗರದ ವಿಶ್ವೇಶ್ವರಯ್ಯ ಪೋಡಿಯಂ ಬ್ಲಾಕ್‌ನಲ್ಲಿ ಈ ಕುರಿತು ಹಮ್ಮಿಕೊಳ್ಳಲಾದ ಪೂರ್ವಾಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ನಗರ ಜಿಲ್ಲೆ ಹಾಗೂ ಬಿ.ಬಿ.ಎಂ.ಪಿ ಇವರುಗಳ ಸಂಯುಕ್ತಾಶ್ರಯದಲ್ಲಿ ಉಚಿತ ಬೃಹತ್ ಆರೋಗ್ಯ ಮೇಳವನ್ನು ಮಾರ್ಚ್ 5 ರಂದು ಸರ್ ಸಿ.ವಿ. ರಾಮನ್ ಆಸ್ಪತ್ರೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ತಜ್ಞ ವೈದ್ಯರಿಂದ ವಿವಿಧ ರೋಗಗಳ ತಪಾಸಣೆ ಮಾಡಿ ಜನರಿಗೆ ಉಚಿತ ಚಿಕಿತ್ಸೆ ಸಲಹೆ ಸೂಚನೆ ನೀಡಿ ಅಗತ್ಯವಿದ್ದಲ್ಲಿ ಹೆಚ್ಚಿನ ಚಿಕ್ಸಿತೆಗಾಗಿ 'ಆಯುಷ್‌ಮಾನ್ ಭಾರತ ಆರೋಗ್ಯ ಕರ್ನಾಟಕ' ಕಾರ್ಯಕ್ರಮದಡಿ ಚಿಕಿತ್ಸೆ ಕೊಡಿಸಲಾಗುವುದು. ಸಾರ್ವಜನಿಕರು ಈ ಶಿಬಿರದ ಉಪಯೋಗವನ್ನು ಪಡೆದು, ಮೇಳವನ್ನು ಯಶಸ್ವಿಗೊಳಿಸಲು ಕೋರಿದರು..

**ಬೃಹತ್ ಆರೋಗ್ಯ ಮೇಳವನ್ನು ಬೆಂಗಳೂರು ಉತ್ತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಹಾಲಕ್ಷ್ಮೀ ಲೇಔಟ್‍ನ ಕೆಂಪೇಗೌಡ ಆಟದ ಮೈದಾನದಲ್ಲಿ ಮಾರ್ಚ್ 7 ರಂದು, ಹಾಗೂ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಮಾರ್ಚ್ 9 ರಂದು ಬಸವನಗುಡಿಯ ನ್ಯಾಷನಲ್ ಕಾಲೇಜು ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಮೇಳಕ್ಕೆ ಶಿಕ್ಷಣ , ಮಹಿಳಾ ಹಾಗೂ ಮಕ್ಕಳ ಕಲ್ಯಾಣ, ಆರೋಗ್ಯ ಹಲವು ಇಲಾಖೆಗಳು, ಬಿ.ಬಿ.ಎಂ.ಪಿ. ಸೇರಿದಂತೆ ಹಲವು ಸಂಸ್ಥೆಗಳು ಸಹಕಾರ ನೀಡುವಂತೆ ಕೋರಿದರು.**

**ಈ ಶಿಬಿರದಲ್ಲಿ ಸ್ತ್ರೀರೋಗ, ಹೃದ್ರೋಗ, ಹೀಗೆ ಹಲವು ವಿಷಯಗಳ ತಜ್ಞ ವೈದ್ಯರು ಪಾಲ್ಗೊಳ್ಳಲಿದ್ದಾರೆ. ಜನರಿಗೆ ಉಚಿತ ಇ.ಸಿ.ಜಿ., ಬಿ.ಪಿ, ಸಕ್ಕರೆ ಕಾಯಿಲೆಯ ಪರೀಕ್ಷೆಗಳನ್ನು ಮಾಡಲಾಗುವುದು. ರಾಷ್ಟ್ರೀಯ ಆರೋಗ್ಯ ಅಭಿಯಾನದ ವಿವಿಧ ಕಾರ್ಯಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಈ ಶಿಬಿರದಲ್ಲಿ ಸಾರ್ವಜನಿಕರಿಗೆ ನೀಡಲಾಗುವುದೆ**

## ಅಬಕಾರಿ ಇಲಾಖಾ ನಿಯಂತ್ರಣ ಕೊಠಡಿಯ ಟೋಲ್ ಫ್ರೀ ದೂರವಾಣಿ ಸಂಖ್ಯೆ 1800-425-5273 ಕ್ಕೆ ಕರೆ ಮಾಡಿ

ಬೆಂಗಳೂರು, ಮಾರ್ಚ್ 1 (ಕರ್ನಾಟಕ ವಾರ್ತೆ)

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಬಕಾರಿ ಇಲಾಖೆಗೆ ಸಂಬಂಧಿಸಿದಂತೆ ಸಾರ್ವಜನಿಕರು 2019 ರ ಲೋಕಸಭಾ ಚುನಾವಣೆ ಸಂಬಂಧ, ಭಾರತೀಯ ಮದ್ಯ ಹಾಗೂ ಅವಕಾರಿ ವಸ್ತುಗಳ ಹೊಂದುವಿಕೆ, ದಾಸ್ತಾನು, ಸಾಗಾಣಿಕೆ, ಮಾರಾಟ ಮತ್ತು ಸಾರ್ವಜನಿಕರಿಗೆ ಹಂಚುವಿಕೆ ಇತ್ಯಾದಿ ಅಬಕಾರಿ ಅಕ್ರಮಗಳ ಯಾವುದೇ ದೂರುಗಳು/ಮಾಹಿತಿಗಳನ್ನು ಈ ಕೆಳಕಂಡ ಅಬಕಾರಿ ಇಲಾಖಾ ನಿಯಂತ್ರಣ ಕೊಠಡಿಯ ಟೋಲ್ ಫ್ರೀ ದೂರವಾಣಿ ಸಂಖ್ಯೆ 1800-425-5273 ಕ್ಕೆ ಕರೆ ಮಾಡಿ ತಿಳಿಸಬಹುದಾಗಿದೆ.

ಈ ಜೊತೆಗೆ ಜಿಲ್ಲೆಯ ಅಬಕಾರಿ ಇಲಾಖಾ ಅಧಿಕಾರಿಗಳ ದೂರವಾಣಿ ಸಂಖ್ಯೆಗಳಿಗೂ ಕೂಡಾ ಕರೆ ಮಾಡಬಹುದಾಗಿದೆ.

ಡೆಪ್ಯುಟಿ ಕಮಿಷನರ್ ಆಫ್ ಎಕ್ಸೈಸ್, ಬೆಂಗಳೂರು ಗ್ರಾಮಾಂತರ ಜಿಲ್ಲೆ – 94495 97029, ಅಬಕಾರಿ ಉಪ ಅಧೀಕ್ಷಕರು, ನೆಲಮಂಗಲ ವಿಭಾಗ – 94495 97036, ಅಬಕಾರಿ ಉಪ ಅಧೀಕ್ಷಕರು, ಹೊಸಕೋಟೆ ವಿಭಾಗ, ಹೊಸಕೋಟೆ – 94495 97034, ಅಬಕಾರಿ ನಿರೀಕ್ಷಕರು, ದೇವನಹಳ್ಳಿ ವಲಯ –

94495 97268, ಅಬಕಾರಿ ನಿರೀಕ್ಷಕರು, ದೊಡ್ಡಬಳ್ಳಾಪುರ ವಲಯ – 94495 97269, ಅಬಕಾರಿ ನಿರೀಕ್ಷಕರು, ನೆಲಮಂಗಲ ವಲಯ – 94495 97271, ಅಬಕಾರಿ ನಿರೀಕ್ಷಕರು, ಹೊಸಕೋಟೆ ವಲಯ – 94495 97270 ಈ ದೂರವಾಣಿಗಳ ಮೂಲಕ ದೂರುಗಳನ್ನು ಸಲ್ಲಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮಾರ್ಚ್ 13 ರಂದು
## ಜಯನಗರದಲ್ಲಿ ಸಾರಿಗೆ ಅದಾಲತ್

ಬೆಂಗಳೂರು, ಮಾರ್ಚ್ 1 (ಕರ್ನಾಟಕ ವಾರ್ತೆ)

ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಬೆಂಗಳೂರು (ದಕ್ಷಿಣ) ಜಯನಗರ ಇಲ್ಲಿ ಮಾರ್ಚ್ 12 ರಂದು ಮಧ್ಯಾಹ್ನ 3–00 ಗಂಟೆಗೆ ಸಾರಿಗೆ ಅದಾಲತ್‌ನ್ನು ಕಚೇರಿಯ 2ನೇ ಮಹಡಿಯ ಆಡಿಟೋರಿಯಂನಲ್ಲಿ ಏರ್ಪಡಿಸಲಾಗಿದೆ.

ಅದಾಲತ್‌ನಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಸಾರ್ವಜನಿಕರು ಸಾರಿಗೆ ಇಲಾಖೆಎ ಸಂಬಂಧಿಸಿದ ಅವಹಾಲು ಮತ್ತು ಕುಂದು ಕೊರತೆಗಳ ಪರಿಹಾರಕ್ಕಾಗಿ ಈ ಅವಕಾಶವನ್ನು ಉಪಯೋಗಿಸಿಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## SARIGE ADALAT

Bengaluru, March 1 (Karnataka Information)

Sarige Adalat will be held on Tuesday 12-03-2019 at 3 pm in the 2nd Auditorium by the Office of the Deputy Commissioner for Transport and Senior Rgional Transport Officer, BANGALORE (South) Jayanagar. Senior Officers of

the Transport Department will be participating in the adalt. Publics are requested to avail this opportunity for redressal of their grievances, if any in the adalt.

## ನಕ್ಷತ್ರ ವೀಕ್ಷಣೆ ಕಾರ್ಯಕ್ರಮ

ಬೆಂಗಳೂರು, ಮಾರ್ಚ್ 1 (ಕರ್ನಾಟಕ ವಾರ್ತೆ)

ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಂಸ್ಥೆಯು ಜವಾಹರ್ ಲಾಲ್ ನೆಹರು ತಾರಾಲಯದಲ್ಲಿ 'ನಕ್ಷತ್ರ ವೀಕ್ಷಣೆ' ಕಾರ್ಯಕ್ರಮವನ್ನು ಮಾರ್ಚ್ 3 ರಂದು ಭಾನುವಾರ ಸಂಜೆ 6.30 ಗಂಟೆಗೆ ಜವಾಹರ್‌ಲಾಲ್ ನೆಹರು ತಾರಾಲಯ, ಶ್ರೀ ಟಿ. ಚೌಡಯ್ಯ ರಸ್ತೆ, ಹೈಗ್ರೌಂಡ್ಸ್, ಬೆಂಗಳೂರು ಇಲ್ಲಿ ಏರ್ಪಡಿಸಿದೆ.

ಪ್ರತಿ ತಿಂಗಳ ಮೊದಲನೇ ಭಾನುವರದಂದು ಸಂಜೆ 5.15 ರಿಂದ 6.15 ಗಂಟೆಯವರೆಗೆ 'ಖಗೋಳ ವಿಜ್ಞಾನ : ಕೇಳಿ–ತಿಳಿ' ಎಂಬ ಹೊಸ ಕಾರ್ಯಕ್ರಮವನ್ನು ಆರಂಭಿಸಲಾಗುತ್ತಿದೆ. ಖಗೋಳ ವಿಜ್ಞಾನಕ್ಕೆ ಸಂಬಂಧಪಟ್ಟ ಪ್ರಶ್ನೆಗಳನ್ನು ತಾರಾಲಯದ ತಜ್ಞರೊಂದಿಗೆ ಚರ್ಚಿಸಿ ಉತ್ತರವನ್ನು ಕಂಡುಕೊಳ್ಳಬಹುದಾಗಿದೆ. ತಮ್ಮ ಪ್ರಶ್ನೆಗಳನ್ನು ಮೊದಲೆ ಮಿಂಚಂಚೆಯ ಮೂಲಕ ಕಳುಹಿಸಬಹುದಾಗಿದೆ. ಪ್ರವೇಶ ಉಚಿತವಾಗಿರುತ್ತದೆ.

ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ 2237 9725/2226 6084 ಅಥವಾ http://www.taralaya.org/monthly-sky-chart.php ಅನ್ನು ಸಂಪರ್ಕಿಸಬಹುದಾಗಿದೆ ಎಂದು ತಾರಾಲಯದ ಪ್ರಕಟಣೆ ತಿಳಿಸಿದೆ.

## ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗೆ ಅರ್ಜಿ ಆಹ್ವಾನ

ಬೆಂಗಳೂರು, ಮಾರ್ಚ್ 1 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ವತಿಯಿಂದ 2019 ನೇ ಸಾಲಿನ ಮೇ ತಿಂಗಳಲ್ಲಿ ನಡೆಸಲಿರುವ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗೆ ಕುಳಿತುಕೊಳ್ಳುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಮಾರ್ಚ್ 1 ರಿಂದ 15 ರವರೆಗೆ ಸಲ್ಲಿಸಬಹುದಾಗಿದೆ.

ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಮಂಡಳಿಯಿಂದ ನಿಗದಿಪಡಿಸಿರುವ ಆಯಾ ಜಿಲ್ಲೆಯ ಪರೀಕ್ಷಾ ಕೇಂದ್ರಗಳ ಮುಖಾಂತರ ಸಲ್ಲಿಸಲು ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಯನ್ನು ಮಂಡಳಿಯ ವೆಬ್‌ಸೈಟ್ www.kseeb.kar.nic.in ನಲ್ಲಿ ಪಡೆಯಬಹುದಾಗಿದೆ ಎಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.

## ಆಹಾರ ಸುರಕ್ಷತಾ ಅಧಿಕಾರಿಗಳು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಿ- ಶಿವಾನಂದ ಪಾಟೀಲ್

ಇತ್ತೀಚಿನ ದಿನಗಳಲ್ಲಿ ಕಲಬೆರೆಕೆ ಆಹಾರ ಪದಾರ್ಥಗಳು ಮಾರಾಟವಾಗುತ್ತಿದ್ದು ಇದನ್ನು ನಿಯಂತ್ರಿಸಿ ಗ್ರಾಹಕರಿಗೆ ಗುಣಮಟ್ಟದ ಆಹಾರ ಪದಾರ್ಥಗಳು ತಲುಪಬೇಕಾದರೆ ಆಹಾರ ಸುರಕ್ಷತಾ ಅಧಿಕಾರಿಗಳು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಬೇಕೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶಿವಾನಂದ ಪಾಟೀಲ್ ಅವರು ಹೇಳಿದರು.

ವಾರ್ತಾ ಸೌಧದಲ್ಲಿರುವ ಮಹಾತ್ಮಾಗಾಂಧಿ ಮಾಧ್ಯಮ ಕೇಂದ್ರದಲ್ಲಿಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೇಂದ್ರ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರ ಹಾಗೂ ರಾಜ್ಯ ಆಹಾರ ಸುರಕ್ಷತಾ ಆಯುಕ್ತಾಲಯದ ಸಂಯುಕ್ತಾಶ್ರಯದಲ್ಲಿ "ಗ್ರಾಹಕರ ಸಬಲೀಕರಣ ಮತ್ತು ಸಾಮರ್ಥ್ಯ ನಿರ್ಮಾಣ" ವಿಷಯದ ಕುರಿತು ಏರ್ಪಡಿಸಲಾಗಿದ್ದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಮೈಸೂರಿನಲ್ಲಿ ನಡೆದ ಪ್ರಸಾದದಲ್ಲಿ ವಿಷಪ್ರಾಸನ ಘಟನೆಯು ಮಾನವ ನಿರ್ಮಿತವಾದುದು. ಇಂತಹ ಘಟನೆಗಳು ಮರುಕಳಿಸದಂತೆ ಆಹಾರ ಸುರಕ್ಷತಾ ಇಲಾಖೆಯು ಕ್ರಮ ಕೈಗೊಳ್ಳಬೇಕೆಂದರಲ್ಲದೆ ಅಧಿಕಾರಿಗಳು ಮುತುವರ್ಜಿವಹಿಸಿ ಕಾರ್ಯ ನಿರ್ವಹಿಸಿ ಸಾರ್ವಜನಿಕ ಆರೋಗ್ಯದ ಕಾಳಜಿವಹಿಸಬೇಕೆಂದರು.

ಕೇಂದ್ರ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಪವನ್ ಅಗರ್‌ವಾಲ್ ವಿಷಯ ಮಂಡಿಸಿದರು. ಸಮಾರಂಭದಲ್ಲಿ ಆಹಾರ ಸುರಕ್ಷತಾಲಯದ ಪ್ರಧಾನ ಕಾರ್ಯದರ್ಶಿ, ಜಾವೇದ್ ಅಖ್ತರ್, ಆಹಾರ ಸುರಕ್ಷತಾ ಆಯುಕ್ತ ಪಂಕಜ್‌ಕುಮಾರ್ ಪಾಂಡೆ ಸೇರಿದಂತೆ ಉನ್ನತಾಧಿಕಾರಿಗಳು ಹಾಜರಿದ್ದರು.

ಛಾಯಾಚಿತ್ರ ಲಗತ್ತಿಸಿದೆ